668

ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 27 |
| 2 | ಮಾನ್ಯ ಸದಸ್ಯರ ಹೆಸರು | ಶ್ರೀ ಪ್ರಕಾಶ್ ಕೆ ರಾಠೋಡ (ನಾಮ ನಿರ್ದೇಶನ ಹೊಂದಿದವರು) |
| 3 | ಉತ್ತರಿಸಬೇಕಾದ ದಿನಾಂಕ | 12/09/2022 |
| 4 | ಉತ್ತರಿಸಬೇಕಾದ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು |

| ಕ್ರ. ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ರಾಜ್ಯದಲ್ಲಿರುವ ಸರ್ಕಾರದ ಜಿಲ್ಲಾ ವೈದ್ಯಕೀಯ ಶಿಕ್ಷಣ ಕಾಲೇಜುಗಳು ಯಾವುವು, ಯಾವ ಯಾವ ಜಿಲ್ಲೆಗಳಲ್ಲಿವೆ: (ವಿವರ ನೀಡುವುದು) | ಪ್ರಸ್ತುತ ರಾಜ್ಯದಲ್ಲಿ ಒಟ್ಟು 21 ಸರ್ಕಾರಿ ವೈದ್ಯಕೀಯ ಕಾಲೇಜುಗಳು, 02 ಇ.ಎಸ್.ಐ ಕಾಲೇಜುಗಳು ಹಾಗೂ 02 ದಂತ ಕಾಲೇಜುಗಳು ಇರುತ್ತವೆ. ಜಿಲ್ಲಾವಾರು ವಿವರಗಳನ್ನು ಅನುಬಂಧ ದಲ್ಲಿರಿಸಿದೆ. |
| ಆ) | ಇತರೆ ಯಾವ ಯಾವ ಜಿಲ್ಲೆಗಳಿಗೆ ವೈದ್ಯಕೀಯ ಕಾಲೇಜುಗಳನ್ನು ಆರಂಭಿಸಲು ಸರ್ಕಾರ ಕ್ರಮ ಕೈಗೊಂಡಿದೆ: (ವಿವರ ನೀಡುವುದು) | ರಾಜ್ಯದ ಪ್ರತಿ ಜಿಲ್ಲೆಗೆ ಒಂದರಂತೆ ಸರ್ಕಾರಿ ವೈದ್ಯಕೀಯ ಕಾಲೇಜನ್ನು ಹಂತ ಹಂತವಾಗಿ ಒದಗಿಸುವುದು ಸರ್ಕಾರದ ನೀತಿಯಾಗಿರುತ್ತದೆ.<br>ರಾಜ್ಯದಲ್ಲಿ ರಾಷ್ಟ್ರೀಯ ವೈದ್ಯಕೀಯ ಪರಿಷತ್ತಿನ (NMC) ನಿಯಮಗಳನ್ವಯ ಸರ್ಕಾರಿ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸಲಾಗುತ್ತಿದೆ. ರಾಜ್ಯ ಸರ್ಕಾರದ ವತಿಯಿಂದ ಹೊಸ ವೈದ್ಯಕೀಯ ಕಾಲೇಜನ್ನು ಸ್ಥಾಪಿಸಲು ಅಂದಾಜು ರೂ.610.00 ಕೋಟಿಗಳ ಅನಾವರ್ತಕ ವೆಚ್ಚ ಹಾಗೂ ವಾರ್ಷಿಕ ರೂ.60.00 ಕೋಟಿಗಳ ಆವರ್ತಕ ವೆಚ್ಚದ ಅವಶ್ಯಕತೆ ಇರುತ್ತದೆ.<br>ಪ್ರಸ್ತುತ ರಾಜ್ಯ ಸರ್ಕಾರದ ವತಿಯಿಂದ ಚಿತ್ರದುರ್ಗ ಜಿಲ್ಲೆಯಲ್ಲಿ 150 ಎಂಬಿಬಿಎಸ್ ಸೀಟುಗಳ ಪ್ರವೇಶ ಮಿತಿಯೊಂದಿಗೆ ಹೊಸ ವೈದ್ಯಕೀಯ ಕಾಲೇಜನ್ನು ಪ್ರಾರಂಭಿಸಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿದ್ದು, ಸದರಿ ಕಾಲೇಜನ್ನು 2023-24 ನೇ ಶೈಕ್ಷಣಿಕ ಸಾಲಿನಿಂದ ಪ್ರಾರಂಭಿಸಲು ಇಸಿ/ಎಫ್‌ಸಿ ನೀಡಲಾಗಿರುತ್ತದೆ.<br>ಪ್ರಸ್ತುತ ಕೇಂದ್ರದ ನೀತಿ ಆಯೋಗದನ್ವಯ ಸರ್ಕಾರಿ ವೈದ್ಯಕೀಯ ಕಾಲೇಜುಗಳಿರದ ಜಿಲ್ಲೆಗಳಲ್ಲಿ ಸಾರ್ವಜನಿಕ-ಖಾಸಗಿ ಸಹಭಾಗಿತ್ವದಲ್ಲಿ (ಪಿಪಿಪಿ) ಹೊಸ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭ ಮಾಡುವ ಬಗ್ಗೆ ಅವಕಾಶ ಕಲ್ಪಿಸಲಾಗಿದ್ದು, ಪ್ರಾಥಮಿಕವಾಗಿ ದಾವಣಗೆರೆ, ಉಡುಪಿ, ಕೋಲಾರ ಮತ್ತು ವಿಜಯಪುರ ಜಿಲ್ಲೆಗಳಲ್ಲಿ ಪಿಪಿಪಿ ಮಾದರಿಯಲ್ಲಿ ವೈದ್ಯಕೀಯ ಕಾಲೇಜು ಪ್ರಾರಂಭಿಸುವ ಬಗ್ಗೆ ಐಡೆಕ್ ಇಲಾಖೆಯ ಸಹಯೋಗದೊಂದಿಗೆ ವಿಸ್ತೃತ ಯೋಜನಾ ವರದಿಯನ್ನು ತಯಾರಿಸಲಾಗುತ್ತಿದೆ. |
| ಇ) | ವಿಜಯಪುರ ಜಿಲ್ಲೆಯಲ್ಲಿ ಸರ್ಕಾರಿ ವೈದ್ಯಕೀಯ ಶಿಕ್ಷಣ ಕಾಲೇಜುಗಳ ಬಹುದಿನಗಳ ಬೇಡಿಕೆ ಇದ್ದು, ವೈದ್ಯಕೀಯ ಶಿಕ್ಷಣ ಕಾಲೇಜುಗಳನ್ನು ಸ್ಥಾಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? | |

ಸಂಖ್ಯೆ: ಎಂಇಡಿ 523 ಎಂಎಂಸಿ 2022

(ಡಾ|| ಕೆ. ಸುಧಾಕರ್)
ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ
ವೈದ್ಯಕೀಯ ಶಿಕ್ಷಣ ಸಚಿವರು